ಸಾವಿರ, ಎರಡು ಸಾವಿರ, ಮೂರು ಸಾವಿರ ರೂ ಈರೀತಿ ಅವರ ಉಳಿತಾಯದ ಹಣವನ್ನು ಈ ರೀತಿ ಸುಲಿಗೆ ಮಾಡಿಕೊಂಡು ಬರುತ್ತಿದ್ದಾರೆ. ಸರ್ಕಾರ ಅವರ ಪಾಲಿಗೆ ಬದುಕಿದೆಯೋ ಸತ್ತಿದೆಯೋ? ಇದನ್ನು ನಾನು ಕೇಳುತ್ತಿದ್ದೇನೆ.

ಅಧ್ಯಕ್ಷರು: ನಾನು ಚರ್ಚೆಗೆ ಅವಕಾಶ ಕೊಡುತ್ತಿಲ್ಲ. ಮಾನ್ಯ ಮಂತ್ರಿಗಳು ತಾವು ಕುಳಿತುಕೊಳ್ಳಿ. ಈಗ ನಾನು ಸಭೆಯ ಮುಂದಿಡಲಾಗುವ ಕಾಗದಪತ್ರಗಳು. ಅದನ್ನು ತೆಗೆದು ಕೊಳ್ಳುತ್ತಿದ್ದೇನೆ.

6. ಸಭೆಯ ಮುಂದಿಡಲಾದ ಕಾಗದಪತ್ರಗಳು.

(ಅ) ಶ್ರೀ ಆರ್.ವಿ. ದೇಶಪಾಂಡೆ(ಸಹಕಾರ ಸಚಿವರು)(ಮಾನ್ಯ ಉಪ ಮುಖ್ಯಮಂತ್ರಿಗಳ ಪರವಾಗಿ): ಮಾನ್ಯ ಅಧ್ಯಕ್ಷರೇ, ಮಾನ್ಯ ಉಪ ಮುಖ್ಯಮಂತ್ರಿಗಳ ಹೆಸರಿನಲ್ಲಿರುವ ಭಾರತ ಸಂವಿಧಾನದ 151(2) ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31 ನೇ ಮಾರ್ಚ್, 2004ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಕರ್ನಾಟಕ ಸರ್ಕಾರದ ಸಿವಿಲ್ ಹಾಗೂ ರಾಜಸ್ವ ಸ್ವೀಕೃತಿಗಳು ವರದಿಗಳನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

(ಆ) ಒಂಬತ್ತನೇ ಪಟ್ಟಿಯ ಕಾಗದಪತ್ರಗಳು

ಶ್ರೀ ಆರ್.ವಿ. ದೇಶಪಾಂಡೆ (ಸಹಕಾರ ಸಚಿವರು)

ಶ್ರೀ ಎನ್. ಧರ್ಮಸಿಂಗ್ (ಮುಖ್ಯಮಂತ್ರಿ ಅವರ ಪರವಾಗಿ)

1952ರ ವಿಚಾರಣಾ ಆಯೋಗದ ಅಧಿನಿಯಮ 3(4)ರ ಮೇರೆಗೆ:–

1.ನ್ಯಾಯಮೂರ್ತಿ ಎಸ್.ಆರ್. ರಾಜಶೇಖರಮೂರ್ತಿ ವಿಚಾರಣಾ ಆಯೋಗದ ವರದಿ ಸಂಪುಟ–I ಮತ್ತು II.

2. ಶ್ರೀ ಟಿ.ನಂಜಪ್ಪ ವಿಚಾರಣಾ ಆಯೋಗದ ವರದಿ, ಮೈಸೂರು ವರದಿಗಳನ್ನು ಮಂಡಿಸುತ್ತೇನೆ.

ಶ್ರೀ ಆರ್.ವಿ.ದೇಶಪಾಂಡೆ (ಸಹಕಾರ ಸಚಿವರು):

(ಶ್ರೀ ಎಂ.ಮಲ್ಲಿಕಾರ್ಜುನ ಖರ್ಗೆ(ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರ ಪರವಾಗಿ)

1980 ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಅಧಿನಿಯಮ 25ರನ್ವಯ:

1. ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕೃಷ್ಣಾ ಮೇಲ್ದಂಡೆ ಯೋಜನೆ, ಭೀಮರಾಯನ ಗುಡಿಯ 2003–04 ನೇ ಸಾಲಿನ ಲೆಕ್ಕಪರಿಶೋಧನಾ ವರದಿ ಮತ್ತು 2004–05ನೇ ಸಾಲಿನ ವಾರ್ಷಿಕ ವರದಿ.

2. ಮಲಪ್ರಭಾ ಮತ್ತು ಘಟಪ್ರಭಾ ಯೋಜನೆಗಳು, ಬೆಳಗಾವಿಯ 2004–05ನೇ ಸಾಲಿನ ವಾರ್ಷಿಕ ವರದಿ.

3. ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರ, ಕಾವೇರಿ ಜಲಾನಯನ ಯೋಜನೆಗಳು, ಮೈಸೂರಿನ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತೇನೆ.

ಶ್ರೀ ಆರ್.ವಿ.ದೇಶಪಾಂಡೆ (ಸಹಕಾರ ಸಚಿವರು)

(ಡಾ: ಹೆಚ್.ಸಿ.ಮಹದೇವಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರ ಪರವಾಗಿ

1993 ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 262(3)ನೇ ಮತ್ತು 300(5)ನೇ ಪ್ರಕರಣದ ಮೇರೆಗೆ:

1. ಕೊಪ್ಪಳ ಜಿಲ್ಲಾ ಪಂಚಾಯತ್‌ನ 2001–02ನೇ ಸಾಲಿನ ದೃಢೀಕರಿಸಿದ ವಾರ್ಷಿಕ ಲೆಕ್ಕ ಮತ್ತು ಲೆಕ್ಕಪರಿಶೋಧನಾ ವರದಿ.

2. ದಕ್ಷಿಣ ಕನ್ನಡ ಜಿಲ್ಲಾ ಪಂಚಾಯಿತಿಯ 2002–03ನೇ ಸಾಲಿನ ವಾರ್ಷಿಕ ಲೆಕ್ಕಪರಿಶೋಧನಾ ವರದಿ.

3. ಬೆಳಗಾವಿ ಜಿಲ್ಲಾ ಪಂಚಾಯತ್‌ನ 2001–02ನೇ ಸಾಲಿನ ವಾರ್ಷಿಕ ಲೆಕ್ಕಪರಿಶೋಧನಾ ವರದಿ.

4. ದಾವಣಗೆರೆ ಜಿಲ್ಲಾ ಪಂಚಾಯತ್‌ನ 2002–03ನೇ ಸಾಲಿನ ಲೆಕ್ಕಪರಿಶೋಧನಾ ವರದಿ ಮತ್ತು ದೃಢೀಕೃತ ವಾರ್ಷಿಕ ಲೆಕ್ಕಪತ್ರ ವರದಿಗಳನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

7. ಅಧ್ಯಕ್ಷರ ಅಪ್ಪಣೆ ಮೇರೆಗೆ.

ವಿಷಯ:– ಉಡುಪಿಯ ಬಬ್ಬುಸ್ವಾಮಿ ದೇವಸ್ಥಾನದ ಎದುರುಗಡೆ ಚರ್ಚ್ ನಿರ್ಮಾಣದ ಕುರಿತು ಪ್ರತಿಭಟನೆ ಬಗ್ಗೆ.

ಶ್ರೀ ಬಿ.ಎಸ್.ಯಡಿಯೂರಪ್ಪ: (ವಿರೋಧ ಪಕ್ಷದ ನಾಯಕರು): ಮಾನ್ಯ ಅಧ್ಯಕ್ಷರೇ, ನಾನು ಎರಡು ನಿಮಿಷದ ಮೇಲೆ ತೆಗೆದುಕೊಳ್ಳುವುದಿಲ್ಲ. ಇದು ನನ್ನ ಡ್ಯೂಟಿ. ಇವತ್ತು ಉಡುಪಿಯಲ್ಲಿ ಸುಮಾರು ಎರಡು ಸಾವಿರ ಜನ ದಲಿತ ಸಮಾಜದ ಬಂಧುಗಳು ಅಲ್ಲಿ ದಲಿತರ ಬಬ್ಬುಸ್ವಾಮಿ